# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 280 |
| ಸದಸ್ಯರ ಹೆಸರು | ಶ್ರೀ ಐವನ್ ಡಿ'ಸೋಜಾ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | ದಿನಾಂಕ: 29.01.2026 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | 2021-23ರ ಅವಧಿಯಲ್ಲಿ ಉಡುಪಿ ಜಿಲ್ಲಾ ಸರ್ಕಾರಿ ವಕೀಲರಾಗಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ನ್ಯಾಯಾಲಯಗಳಲ್ಲಿ ತನಿಖಾ ಹಂತದಲ್ಲಿ ಇದ್ದ ವಿವಿಧ ಪ್ರಕರಣಗಳಲ್ಲಿ ಸರ್ಕಾರದ ಪರವಾಗಿ ಲಿಖಿತ ಹೇಳಿಕೆ ಸಲ್ಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಒಟ್ಟು ಎಷ್ಟು ಪ್ರಕರಣಗಳಲ್ಲಿ ಲಿಖಿತ ಹೇಳಿಕೆ ಸಲ್ಲಿಸಿರುವುದಿಲ್ಲ. ಪ್ರಕರಣಗಳ ವಿವರ ನೀಡುವುದು; | ಹೌದು<br><br>2021-23ರ ಅವಧಿಯಲ್ಲಿ ಶ್ರೀ ಎ. ಸಂತೋಷ್ ಹೆಬ್ಬಾರ್ ಇವರು ಉಡುಪಿ ಜಿಲ್ಲೆಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಜಿಲ್ಲಾ ಸರ್ಕಾರಿ ವಕೀಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿ ಅವಧಿಯಲ್ಲಿ ನ್ಯಾಯಾಲಯಗಳಲ್ಲಿ ತನಿಖಾ ಹಂತದಲ್ಲಿ ಇದ್ದ ಪ್ರಕರಣಗಳಲ್ಲಿ ಸರ್ಕಾರದ ಪರವಾಗಿ ಲಿಖಿತ ಹೇಳಿಕೆ ಸಲ್ಲಿಸದೇ ಇರುವ ಕುರಿತು ಅಧ್ಯಕ್ಷರು, ಉಡುಪಿ ವಕೀಲರ ಸಂಘ ಇವರಿಂದ ದೂರು ಸ್ವೀಕೃತವಾಗಿದ್ದು, ಸದರಿ ದೂರು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಆದ್ದರಿಂದ, ಉಡುಪಿ ಜಿಲ್ಲೆಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ 2021-23ರ ಅವಧಿಯಲ್ಲಿ ಜಿಲ್ಲಾ ಸರ್ಕಾರಿ ವಕೀಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎ. ಸಂತೋಷ್ ಹೆಬ್ಬಾರ್ ಇವರು ಎಷ್ಟು ಪ್ರಕರಣಗಳಲ್ಲಿ ಲಿಖಿತ ಹೇಳಿಕೆ ಸಲ್ಲಿಸಿರುವುದಿಲ್ಲವೆಂದು ಹಾಗೂ ಇದರಿಂದ ಸರ್ಕಾರಕ್ಕೆ ಉಂಟಾಗಿರುವ ನಷ್ಟದ ಕುರಿತು ವಿಚಾರಣೆ ನಡೆಸಿ, ವಿಚಾರಣಾ ವರದಿಯಲ್ಲಿ ಸಲ್ಲಿಸುವಂತೆ ದಿನಾಂಕ: 22.01.2026ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಉಡುಪಿ ಇವರನ್ನು ಕೋರಲಾಗಿದೆ.<br><br>ಮುಂದುವರೆದು, ಸದರಿ ದೂರಿಗೆ ಸಂಬಂಧಿಸಿದಂತೆ ಮಾಹಿತಿ ಒದಗಿಸುವಂತೆ ಜಿಲ್ಲಾ ಸರ್ಕಾರಿ ವಕೀಲರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉಡುಪಿ ಇವರನ್ನು ಸಹ ದಿನಾಂಕ: 22.01.2026ರ ಪತ್ರದಲ್ಲಿ ಕೋರಲಾಗಿದೆ. |
| (ಆ) | ಉಡುಪಿ ಜಿಲ್ಲಾ ಸರ್ಕಾರಿ ವಕೀಲರು ಎಸಗಿರುವ ಅಕ್ರಮ / ಕರ್ತವ್ಯಲೋಪಗಳ ಬಗ್ಗೆ ತನಿಖೆ ನಡೆಸಿ, ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆಯೇ; ಸಲ್ಲಿಸಲ್ಪಟ್ಟಿದ್ದಲ್ಲಿ, | ಹೌದು.<br><br>2021-23ರ ಅವಧಿಯಲ್ಲಿ ಜಿಲ್ಲಾ ಸರ್ಕಾರಿ ವಕೀಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ |

DFA/2547122

| | | |
|---|---|---|
| | ತನಿಖಾಧಿಕಾರಿಯಾಗಿ ಯಾರನ್ನು ನೇಮಿಸಲಾಗಿದೆ ಮತ್ತು ಸದರಿಯವರ ಕರ್ತವ್ಯಲೋಪದ ಬಗ್ಗೆ ಸರ್ಕಾರದಿಂದ ಏನು ಕ್ರಮ ಕೈಗೊಳ್ಳಲಾಗಿದೆ ವಿವರ ಒದಗಿಸುವುದು; | ಅಕ್ರಮ / ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಹಾಗೂ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರು, ಉಡುಪಿ ವಕೀಲರ ಸಂಘ ಇವರು ದೂರು ಸಲ್ಲಿಸಿದ್ದು, ಸದರಿ ದೂರಿನ ಕುರಿತು ವಿಚಾರಣೆ ನಡೆಸಿ, ವಿಚಾರಣಾ ವರದಿಯಲ್ಲಿ ಸಲ್ಲಿಸುವಂತೆ ದಿನಾಂಕ: 22.01.2026ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಉಡುಪಿ ಮತ್ತು ಜಿಲ್ಲಾ ಸರ್ಕಾರಿ ವಕೀಲರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಉಡುಪಿ ಇವರನ್ನು ಕೋರಲಾಗಿದೆ.<br><br>ಮುಂದುವರೆದು, ಸದರಿ ದೂರಿನ ಸಂಬಂಧಿಸಿದಂತೆ ವಿಚಾರಣಾ ವರದಿ / ಮಾಹಿತಿ ಸ್ವೀಕೃತವಾದ ನಂತರ ಸದರಿಯವರ ವಿಚಾರಣಾ ವರದಿಯಲ್ಲಿನ ಅಂಶಗಳನ್ನು ಪರಿಶೀಲಿಸಿ, ಹಿಂದಿನ ಜಿಲ್ಲಾ ಸರ್ಕಾರಿ ವಕೀಲರ ಕರ್ತವ್ಯಲೋಪದ ಕುರಿತು ಮುಂದಿನ ಕ್ರಮ ಕೈಗೊಳ್ಳಲಾಗುವುದು. |
| (ಇ) | ಸರ್ಕಾರದ ಹಿತರಕ್ಷಣೆ ಮಾಡಬೇಕಾದ ಜಿಲ್ಲಾ ಸರ್ಕಾರಿ ವಕೀಲರು ನ್ಯಾಯಾಲಯದಲ್ಲಿ ತನಿಖೆಯಲ್ಲಿರುವ ವಿವಿಧ ಪ್ರಕರಣಗಳಲ್ಲಿ ಲಿಖಿತ ಹೇಳಿಕೆ ಸಲ್ಲಿಸದಿರುವುದರಿಂದ ಸರ್ಕಾರಕ್ಕೆ ಹಿನ್ನಡೆಯಾಗಿ ಕರ್ತವ್ಯಲೋಪ ಎಸಗಿರುವ ಗಂಭೀರ ಪ್ರಕರಣಗಳಾಗಿದ್ದು, ಇಂತಹ ಪ್ರಕರಣಗಳು ಮರುಕಳಿಸದಂತೆ ನೋಡಿಕೊಳ್ಳುವ ಹಿತದೃಷ್ಟಿಯಿಂದ ವೃತ್ತಿ ದುರ್ನಡತೆಗಾಗಿ ಸದರಿಯವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿಗೆ ಸರ್ಕಾರದಿಂದ ಮನವಿ ಸಲ್ಲಿಸಲಾಗಿದೆಯೇ? (ವಿವರ ಒದಗಿಸುವುದು); | ಶ್ರೀ ಎ. ಸಂತೋಷ್ ಹೆಬ್ಬಾರ್, ಜಿಲ್ಲಾ ಸರ್ಕಾರಿ ವಕೀಲರು, ಉಡುಪಿ ಇವರು 2021-23ರಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ನ್ಯಾಯಾಲಯದ ತನಿಖೆಯಲ್ಲಿರುವ ವಿವಿಧ ಪ್ರಕರಣಗಳಲ್ಲಿ ಲಿಖಿತ ಹೇಳಿಕೆ ಸಲ್ಲಿಸದಿರುವುದರಿಂದ ಸರ್ಕಾರಕ್ಕೆ ಹಿನ್ನಡೆಯಾಗಿ ಕರ್ತವ್ಯಲೋಪ ಎಸಗಿರುವ ಕುರಿತು ಸ್ವೀಕೃತವಾಗಿರುವ ದೂರಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಉಡುಪಿ ಮತ್ತು ಜಿಲ್ಲಾ ಸರ್ಕಾರಿ ವಕೀಲರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಉಡುಪಿ ಇವರಿಂದ ವಿಚಾರಣಾ ವರದಿ ಸ್ವೀಕೃತವಾದ ನಂತರ ಈ ಕುರಿತು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಲಾ-ಎಲ್ಎಡಿ/80/2026**

**(ಎಚ್.ಕೆ. ಪಾಟೀಲ್)**
ಕಾನೂನು, ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು



File No. LAW-LAD/80/2026-ADMN2-LAW SEC (Computer No. 2051931)
Generated from eOffice by H K PATIL, MIN-LAW(HKP), MINISTER, MINISTER - LAW on 27/01/2026 04:53 PM